# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು: | ಡಾ॥ ಜೈಮಾಲ ರಾಮಚಂದ್ರ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 288 |
| ಉತ್ತರಿಸ ಬೇಕಾದ ದಿನಾಂಕ: | 04.03.2020 |
| ಉತ್ತರಿಸುವ ಸಚಿವರು | ಶ್ರೀ ವಿ. ಸೋಮಣ್ಣ, ವಸತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 03 ವರ್ಷಗಳಲ್ಲಿ ರಾಜೀವ್ ಗಾಂಧಿ ಹಾಗೂ ವಾಜಪೇಯಿ ವಸತಿ ಯೋಜನೆಯಡಿಯಲ್ಲಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು: (ಸಂಪೂರ್ಣ ವಿವರ ನೀಡುವುದು) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ವಸತಿ ಯೋಜನೆಯಡಿ 1243757 ಮನೆಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ಮನೆಗಳಲ್ಲಿ 541683 ಮನೆಗಳು ಪೂರ್ಣಗೊಂಡಿದ್ದು, 366973 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿರುತ್ತದೆ. ಉಳಿದಂತೆ 315191 ಮನೆಗಳು ಪ್ರಾರಂಭವಾಗಬೇಕಾಗಿರುತ್ತದೆ. ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಲಾಗಿದೆ. |
| ಆ) | ಸದರಿ ಮನೆಗಳ ನಿರ್ಮಾಣ ಕಾಮಗಾರಿಗೆ ಇಲ್ಲಿಯವರೆವಿಗೂ ಸರ್ಕಾರವು ಖರ್ಚು ಮಾಡಿರುವ ವೆಚ್ಚವೆಷ್ಟು : | ವಿವಿಧ ವಸತಿ ಯೋಜನೆಗಳಡಿ ಕಳೆದ 3 ವರ್ಷಗಳಲ್ಲಿ ಅಂದರೆ 2016-17ನೇ ಸಾಲಿನಿಂದ 2019-20ನೇ ಸಾಲಿನ ಜನವರಿ ಅಂತ್ಯದವರೆಗೆ ರೂ.17,004.89ಕೋಟಿಗಳನ್ನು ಖರ್ಚುಮಾಡಲಾಗಿದೆ. |
| ಇ) | ಸದರಿ ನಿರ್ಮಾಣ ಗೊಂಡಿರುವ ಆಶ್ರಯ ಮನೆಗಳ ಅರ್ಹ ಫಲಾನುಭವಿಗಳಿಗೆ ಲಭಿಸಿವೆಯೇ ; ಫಲಾನುಭವಿಗಳ ಸಂಪೂರ್ಣ ಮಾಹಿತಿ ನೀಡುವುದು ? | ವಿವಿಧ ವಸತಿ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಯನ್ನು ಗ್ರಾಮೀಣ ಪ್ರದೇಶದಲ್ಲಿ ಗ್ರಾಮ ಸಭೆಯ ಮೂಲಕ ಹಾಗೂ ನಗರ ಪ್ರದೇಶದಲ್ಲಿ ಆಶ್ರಯ ಸಮಿತಿಯ ಮೂಲಕ ನೆರವೇರಿಸಲಾಗುತ್ತಿದೆ.<br><br>ಆಯ್ಕೆಯಾದ ಫಲಾನುಭವಿಗಳು ತಮ್ಮ ಮನೆಯನ್ನು ಸ್ವತಃ ತಾವೇ ನಿರ್ಮಿಸಿಕೊಳ್ಳಲು ಪ್ರಥಮ ಆದ್ಯತೆಯನ್ನು ನೀಡಲಾಗಿದ್ದು, ಸದರಿ ಮನೆಯ ಭೌತಿಕ ಪ್ರಗತಿಯ ಛಾಯಾಚಿತ್ರಗಳನ್ನು ಜಿಪಿಎಸ್.ಗೆ ಅಳವಡಿಸುವ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. |

ನಿಗಮದ ಹಂತದಲ್ಲಿ ಜಿ.ಪಿ.ಎಸ್ ಛಾಯಾಚಿತ್ರಗಳನ್ನು ಆಧರಿಸಿ ಅನರ್ಹರನ್ನು ಗುರುತಿಸಲಾಗಿದ್ದು, ಈವರೆಗೆ ನಿಗಮಕ್ಕೆ 514100 ಪ್ರಸ್ತಾವನೆಗಳು ಸಲ್ಲಿಕೆಯಾಗಿರುತ್ತದೆ. ಈ ಪೈಕಿ 511873 ಪ್ರಸ್ತಾವನೆಗಳನ್ನು ಅನುದಾನ ಬಿಡುಗಡೆಗೆ ಪರಿಗಣಿಸಲಾಗಿದ್ದು, ಇನ್ನೂ 2227 ಪ್ರಸ್ತಾವನೆಗಳನ್ನು ಮರುಪರಿಶೀಲನೆಗಾಗಿ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ /ಸ್ಥಳೀಯ ಸಂಸ್ಥೆಗಳಿಗೆ ಹಿಂದಿರುಗಿಸಲಾಗಿದೆ.

ಉಳಿದಂತೆ ಈ ಕೆಳಕಂಡ ಪ್ರಕರಣಗಳನ್ನು ಗುರುತಿಸಲಾಗಿದೆ.

**<u>ಹೆಚ್ಚುವೆಚ್ಚದ ಮನೆಗಳು (Building / High Cost):</u>**

ನಿಯಮಾನುಸಾರ ಸರ್ಕಾರವು ಪ್ರತಿ ಮನೆಗೆ ನೀಡುವ ಸಹಾಯಧನದ ಜೊತೆಗೆ ಫಲಾನುಭವಿಗಳ ಸ್ವಂತ ವಂತಿಕೆ ಹಣವನ್ನು ಉಪಯೋಗಿಸಿಕೊಂಡು ಗರಿಷ್ಠ 5 ಲಕ್ಷದವರಗೆ ಮನೆ ನಿರ್ಮಿಸಿಕೊಳ್ಳಲು ಅವಕಾಶ ನೀಡಿದೆ. ಆದರೆ ಕೆಲವು ಫಲಾನುಭವಿಗಳು ರೂ.6.00 ರಿಂದ ರೂ.20.00 ಲಕ್ಷಕ್ಕೂ ಹೆಚ್ಚು ಅನುದಾನ ವಿನಿಯೋಗಿಸಿ ಮನೆ ನಿರ್ಮಿಸುತ್ತಿರುವ ಕಾರಣ, ಅನರ್ಹರೆಂದು ಪರಿಗಣಿಸಿ ಅನುದಾನವನ್ನು ತಡೆಯಿಡಿಯಲಾಗಿದೆ. ರಾಜ್ಯದಲ್ಲಿ ಇಂತಹ ಒಟ್ಟು 410 ಪ್ರಕರಣಗಳನ್ನು ಗುರುತಿಸಲಾಗಿದೆ.

**<u>ಮನೆವಿಸ್ತರಣೆ (House Extension):</u>**

ವಾಸಕ್ಕೆ ಈಗಾಗಲೇ ಸ್ವಂತ ಮನೆ ಹೊಂದಿರುವ ಫಲಾನುಭವಿಯು ತನ್ನ ಮನೆಯನ್ನು ವಿಸ್ತರಣೆ ಮಾಡಿಕೊಳ್ಳುತ್ತಿರುವ ಫಲಾನುಭವಿಗಳನ್ನು ಅನರ್ಹರೆಂದು ಪರಿಗಣಿಸಿ ಅನುದಾನವನ್ನು ತಡೆಹಿಡಿಯಲಾಗಿದೆ. ರಾಜ್ಯದಲ್ಲಿ ಇಂತಹ ಒಟ್ಟು 49 ಪ್ರಕರಣಗಳನ್ನು ಗುರುತಿಸಲಾಗಿದೆ.

**<u>ಹಳೆ ಮನೆಗಳು / ಹಂತವಾರು ಛಾಯಾಚಿತ್ರವಿಲ್ಲದ ಮನೆಗಳು (Old House Or Required Stage wise Photo):</u>**

| | | |
|---|---|---|
| | | ಸುಮಾರು ವರ್ಷದ ಹಿಂದೆ ನಿರ್ಮಿಸಿರುವ ಹಳೇ ಮನೆಗಳನ್ನು ಜಿ.ಪಿ.ಎಸ್.ಗೆ ಅಳವಡಿಸಿರುವ ಕಾರಣ ಮತ್ತು ಮನೆ ನಿರ್ಮಾಣಕ್ಕೆ ಸಂಬಂಧಪಟ್ಟಂತೆ 4 ಹಂತದ ಜಿ.ಪಿ.ಎಸ್. ಛಾಯಾಚಿತ್ರಗಳನ್ನು ಅಳವಡಿಸದೇ, ಹಾಲಿ ಇರುವ ಮನೆಯನ್ನೇ ಜಿ.ಪಿ.ಎಸ್.ಗೆ ಅಳವಡಿಸಿರುವ ಕಾರಣ ಅಂತಹ ಫಲಾನುಭವಿಗಳನ್ನು ಅನರ್ಹರೆಂದು ಪರಿಗಣಿಸಿ ಅನುದಾನವನ್ನು ತಡೆಹಿಡಿಯಲಾಗಿದೆ. ರಾಜ್ಯದಲ್ಲಿ ಇಂತಹ ಒಟ್ಟು 1583 ಪ್ರಕರಣಗಳನ್ನು ಗುರುತಿಸಲಾಗಿದೆ.<br><br>**ವಾಸಯೇತರ ಉದ್ದೇಶದ ಮನೆಗಳು (Non Residential):**<br>ನಿರ್ಮಿಸುತ್ತಿರುವ ಮನೆಯನ್ನು ವಾಸೇತರ ಉದ್ದೇಶಕ್ಕಾಗಿ ಬಳಸಿಕೊಳ್ಳುತ್ತಿರುವುದಾಗಿ ಕಂಡು ಬಂದ ಫಲಾನುಭವಿಗಳು ಅನರ್ಹರೆಂದು ಪರಿಗಣಿಸಿ ಅನುದಾನವನ್ನು ತಡೆಹಿಡಿಯಲಾಗಿದೆ. ರಾಜ್ಯದಲ್ಲಿ ಇಂತ ಒಟ್ಟು 185 ಪ್ರಕರಣಗಳನ್ನು ಗುರುತಿಸಲಾಗಿದೆ.<br>ಒಂದು ವೇಳೆ ವಾಸ್ತವಿಕವಾಗಿ ನಿರ್ಮಾಣಗೊಂಡಿರುವ ಮನೆಯು ಅರ್ಹವಿರುವುದು ಕಂಡುಬಂದಲ್ಲಿ, ಸ್ಥಳೀಯ ಸಂಸ್ಥೆ/ ತಾಲ್ಲೂಕು ಮಟ್ಟದ ಅಧಿಕಾರಿಗಳ ದೃಢೀಕರಣಗೊಂದಿಗೆ, ನಿಗದಿತ ನಮೂನೆಯಲ್ಲಿ ಪ್ರಸ್ತಾವನೆಯನ್ನು ಜಿಲ್ಲಾಪಂಚಾಯತಿಯ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು / ಜಿಲ್ಲಾಧಿಕಾರಿಗಳು DSC ಮೂಲಕ ಅನುಮೋದಿಸಿ ಆನ್ಲೈನ್ನಲ್ಲಿ ನಿಗಮಕ್ಕೆ ಸಲ್ಲಿಸಿದಲ್ಲಿ, ಪರಿಶೀಲಿಸಿ ಅರ್ಹರಿದ್ದಲ್ಲಿ ಅನುದಾನ ಬಿಡುಗಡೆಗೊಳಿಸಲು ಕ್ರಮವಹಿಸಲಾಗುತ್ತಿದೆ.<br>ಫಲಾನುಭವಿವಾರು ವಿವರಗಳನ್ನು ಅನುಬಂಧ-2ರಲ್ಲಿ ನೀಡಲಾಗಿದೆ(ಸಿ.ಡಿ). |

ವ ಇ 49 ಹೆಚ್‌ಎಂ 2020

(ವಿ. ಸೋಮಣ್ಣ)